ಸದನದಲ್ಲಿ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**
ನೂರ ನಲವತ್ತೊಂದನೆಯ ಅಧಿವೇಶನ
ಶುಕ್ರವಾರ, ದಿನಾಂಕ: 25ನೇ ಸೆಪ್ಟಂಬರ್, 2020

ರಾಜ್ಯದಲ್ಲಿ ಪ್ರತಿಮೆ ಪ್ರತಿಷ್ಠಾಪನೆ ಬಗ್ಗೆ

ಶ್ರೀ ಕೆ. ಗೋವಿಂದರಾಜ್ (ವಿಧಾನಸಭೆಯಿಂದ ಚುನಾಯಿತರಾದವರು)-

71 (734) ಪ್ರವಾಸೋದ್ಯಮ, ಕನ್ನಡ ಮತ್ತುಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಇದುವರೆವಿಗೂ ಪ್ರತಿಷ್ಠಾಪಿಸಲಾಗಿರುವ ಪ್ರತಿಮೆಗಳ ಸಂಖ್ಯೆ ಎಷ್ಟು; (ಐತಿಹಾಸಿಕ, ರಾಜಕೀಯ, ಸ್ವಾತಂತ್ರ್ಯ ಹೋರಾಟಗಾರರೂ ಸೇರಿದಂತೆ ಪ್ರತ್ಯೇಕ ಮಾಹಿತಿಯನ್ನು ಒದಗಿಸುವುದು)

(ಆ) ರಾಜ್ಯದಲ್ಲಿ ಪ್ರತಿಮೆಗಳ ಪ್ರತಿಷ್ಠಾಪನೆಗೆ ನಿಯಮಾವಳಿ ರೂಪಿಸಲಾಗಿದೆಯೇ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಇ) ಹಲವಾರು ಬಾರಿ ವಿವಿಧ ಕಾರಣಗಳಿಗಾಗಿ ಪ್ರತಿಮೆಗಳ ಪ್ರತಿಷ್ಠಾಪನೆ ಸಮಾಜದ ಶಾಂತಿ ಭಂಗಕ್ಕೆ, ಕೋಮು ಸೌಹಾರ್ದಕ್ಕೆ ಧಕ್ಕೆ ತರುತ್ತಿರುವ ಅಂಶವನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆಯೇ; ಹಾಗಿದ್ದಲ್ಲಿ,ಈ ನಿಟ್ಟಿನಲ್ಲಿ ಯಾವ ದೀರ್ಘಾವಧಿ ಯೋಜನೆಗಳನ್ನು ಸರ್ಕಾರ ರೂಪಿಸಿದೆ? (ಮಾಹಿತಿ ಒದಗಿಸುವುದು)